**Akashvani : Bangalore**
**National Bulletin In Kannada**
**26.04.2025 / 19.35 hrs**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**26.04.2025 / 19.35 hrs**

**<><*<><>*><>**

ಮುಖ್ಯಾಂಶಗಳು

**೧. ರಾಷ್ಟ್ರೀಯ ಭದ್ರತೆಯ ಹಿತದೃಷ್ಟಿಯಿಂದ ಭಯೋತ್ಪಾದನಾ ವಿರೋಧಿ ಕಾರ್ಯಾಚರಣೆಗಳ ನೇರ ಪ್ರಸಾರ ಮಾಡದಂತೆ ಮಾಧ್ಯಮಗಳಿಗೆ ನಿರ್ದೇಶನ**

**೨. ಎಲೆಕ್ಟ್ರಾನಿಕ್ಸ್ ಘಟಕಗಳ ಉತ್ಪಾದನಾ ಯೋಜನೆ; ಆನ್‌ಲೈನ ಪೋರ್ಟಲ್ ಬಿಡುಗಡೆಗೊಳಿಸಿದ ಕೇಂದ್ರ ಸಚಿವ ಅಶ್ವಿನಿ ವೈಷ್ಣವ್**

**೩. ಧಾರ್ಮಿಕ ವಿಧಿ-ವಿಧಾನಗಳೊಂದಿಗೆ ಪೋಪ್ ಫ್ರಾನ್ಸಿಸ್ ಅಂತ್ಯಕ್ರಿಯೆ**

**೪. ’ಮನ್ ಕಿ ಬಾತ್’ ; ಭಾರತೀಯರನ್ನು ಉದ್ದೇಶಿಸಿ ನಾಳೆ ಪ್ರಧಾನಿ ನರೇಂದ್ರ ಮೋದಿ ಮನದಾಳದ ಮಾತು**

**೫. ಐಪಿಎಲ್ ಟಿ-೨೦ ಕ್ರಿಕೆಟ್; ಕೋಲ್ಕತ್ತಾ ನೈಟ್ ರೈಡರ್ಸ್ ವಿರುದ್ಧ ಟಾಸ್ ಗೆದ್ದ ಪಂಜಾಬ್ ಕಿಂಗ್ಸ್ ಬ್ಯಾಟಿಂಗ್ ಆಯ್ಕೆ**

**<><*<><>*><>**

ರಾಷ್ಟ್ರೀಯ ಭದ್ರತೆಯ ಹಿತದೃಷ್ಟಿಯಿಂದ ಭಯೋತ್ಪಾದನಾ ವಿರೋಧಿ ಕಾರ್ಯಾಚರಣೆಗಳು ಮತ್ತು ಭದ್ರತಾ ಪಡೆಗಳ ಚಲನವಲನಗಳ ನೇರ ಪ್ರಸಾರ ಮಾಡದಂತೆ ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವಾಲಯವು ಎಲ್ಲಾ ಮಾಧ್ಯಮ ವಾಹಿನಿಗಳಿಗೆ ಸಲಹೆ ನೀಡಿದೆ. ರಾಷ್ಟ್ರೀಯ ಭದ್ರತೆಯನ್ನು ಕಾಪಾಡುವಲ್ಲಿ ಮಾಧ್ಯಮಗಳು, ಡಿಜಿಟಲ್ ವೇದಿಕೆಗಳು ಮತ್ತು ವ್ಯಕ್ತಿಗಳು ಪ್ರಮುಖ ಪಾತ್ರ ವಹಿಸುತ್ತಾರೆ. ರಕ್ಷಣಾ ಕಾರ್ಯಾಚರಣೆಗಳು ಅಥವಾ ಚಲನವಲನಗಳಿಗೆ ಸಂಬಂಧಿಸಿದ ಮೂಲ ಆಧಾರಿತ ಮಾಹಿತಿಯನ್ನು ಆಧರಿಸಿ ವರದಿ ಮಾಡುವುದನ್ನು ನಿಲ್ಲಿಸುವಂತೆ ಸಚಿವಾಲಯ ನಿರ್ದೇಶಿಸಿದೆ. ಸೂಕ್ಷ್ಮ ಮಾಹಿತಿಯನ್ನು ಅಕಾಲಿಕವಾಗಿ ಬಹಿರಂಗಪಡಿಸುವುದು, ಕಾರ್ಯಾಚರಣೆಯ ಪರಿಣಾಮಕಾರಿತ್ವ ಮತ್ತು ಸಿಬ್ಬಂದಿಗಳ ಸುರಕ್ಷತೆಗೆ ಅಪಾಯವನ್ನುಂಟು ಮಾಡುತ್ತದೆ ಎಂದು ಸಚಿವಾಲಯ ಹೇಳಿದೆ.

**<><*<><>*><>**

ಯುವಕರು ರಾಷ್ಟ್ರ ನಿರ್ಮಾಣದಲ್ಲಿ ಭಾಗವಹಿಸಿದಾಗ, ರಾಷ್ಟ್ರವು ವೇಗವಾಗಿ ಅಭಿವೃದ್ಧಿ ಹೊಂದುತ್ತದೆ ಮತ್ತು ಜಗತ್ತಿನಲ್ಲಿ ತನ್ನ ಛಾಪು ಮೂಡಿಸುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ರೋಜ್‌ಗಾರ್ ಮೇಳದಲ್ಲಿಂದು ವಿವಿಧ ಸರ್ಕಾರಿ ಇಲಾಖೆಗಳಲ್ಲಿ ಹೊಸದಾಗಿ ನೇಮಕಗೊಂಡ ೫೧ ಸಾವಿರಕ್ಕೂ ಹೆಚ್ಚು ಯುವಕರಿಗೆ ನೇಮಕಾತಿ ಪತ್ರಗಳನ್ನು ವಿಡಿಯೋ ಕಾನ್ಫರೆನ್ಸ್ ಮೂಲಕ ವಿತರಿಸಿದ ನಂತರ ಅವರು ಮಾತನಾಡಿದರು. ಇಂದು, ತಮ್ಮ ಕಠಿಣ ಪರಿಶ್ರಮ ಮತ್ತು ನಾವೀನ್ಯತೆಯೊಂದಿಗೆ, ದೇಶದ ಯುವಕರು ರಾಷ್ಟ್ರವು ಎಷ್ಟು ಸಾಮರ್ಥ್ಯವನ್ನು ಹೊಂದಿದೆ ಎಂಬುದನ್ನು ಜಗತ್ತಿಗೆ ತೋರಿಸುತ್ತಿದ್ದಾರೆ ಎಂದರು. ಇಂದು ನೇಮಕಾತಿ ಪತ್ರಗಳನ್ನು ಪಡೆದ ಯುವಕರು ದೇಶದ ಆರ್ಥಿಕತೆಯನ್ನು ಬಲಪಡಿಸುವ, ಆಂತರಿಕ ಭದ್ರತೆಯನ್ನು ಒದಗಿಸುವ, ಆಧುನಿಕ ಮೂಲಸೌಕರ್ಯಗಳನ್ನು ಅಭಿವೃದ್ಧಿಪಡಿಸುವ ಮತ್ತು ಕಾರ್ಮಿಕರ ಜೀವನದಲ್ಲಿ ಬದಲಾವಣೆಗಳನ್ನು ತರುವ ದೊಡ್ಡ ಜವಾಬ್ದಾರಿಯನ್ನು ಹೊಂದಿದ್ದಾರೆ ಎಂದು ಪ್ರಧಾನಿ ಮೋದಿ ಹೇಳಿದರು.

**<><*<><>*><>**

ನವದೆಹಲಿಯಲ್ಲಿಂದು ಎಲೆಕ್ಟ್ರಾನಿಕ್ಸ್ ಘಟಕಗಳ ಉತ್ಪಾದನಾ ಯೋಜನೆಯ ಮಾರ್ಗಸೂಚಿಗಳು ಮತ್ತು ಆನ್‌ಲೈನ್ ಪೋರ್ಟಲ್ ಅನ್ನು ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಬಿಡುಗಡೆ ಮಾಡಿದರು. ಎಲೆಕ್ಟ್ರಾನಿಕ್ಸ್ ಪೂರೈಕೆ ಸರಪಳಿಯಲ್ಲಿ ಭಾರತವನ್ನು ಆತ್ಮನಿರ್ಭರಗೊಳಿಸಲು ಕೇಂದ್ರ ಸಚಿವ ಸಂಪುಟವು ಇತ್ತೀಚೆಗೆ ೨೨ ಸಾವಿರದ ೯೧೯ ಕೋಟಿ ರೂಪಾಯಿಗಳ ನಿಧಿಯೊಂದಿಗೆ ಈ ಯೋಜನೆಗೆ ಅನುಮೋದನೆ ನೀಡಿತ್ತು. ಈ ಯೋಜನೆಯು ಮೇ ೧ ರಿಂದ ಆನ್‌ಲೈನ್ ಪೋರ್ಟಲ್ ಮೂಲಕ ಅರ್ಜಿಗಳನ್ನು ಸ್ವೀಕರಿಸಲು ಮುಕ್ತವಾಗಿರುತ್ತದೆ. ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ಅಶ್ವಿನಿ ವೈಷ್ಣವ್, ಕಳೆದ ಹತ್ತು ವರ್ಷಗಳಲ್ಲಿ ದೇಶದ ಎಲೆಕ್ಟ್ರಾನಿಕ್ಸ್ ಉತ್ಪಾದನೆ ಐದು ಪಟ್ಟು ಹೆಚ್ಚಳವಾಗಿದೆ. ಇದೇ ವೇಳೆ ಎಲೆಕ್ಟ್ರಾನಿಕ್ಸ್ ರಫ್ತು ೬ ಪಟ್ಟು ಹೆಚ್ಚಾಗಿದೆ ಎಂದು ಹೇಳಿದರು. ಎಲೆಕ್ಟ್ರಾನಿಕ್ಸ್ ಘಟಕ ಉತ್ಪಾದನಾ ಪರಿಸರ ವ್ಯವಸ್ಥೆಯಲ್ಲಿ ಎಲೆಕ್ಟ್ರಾನಿಕ್ಸ್ ಘಟಕ ಉತ್ಪಾದನಾ ಯೋಜನೆಯು ದೊಡ್ಡ ಹೂಡಿಕೆಗಳನ್ನು ಆಕರ್ಷಿಸುವ ಮೂಲಕ ಬಲವಾದ ಘಟಕ ಪರಿಸರ ವ್ಯವಸ್ಥೆಯನ್ನು ಅಭಿವೃದ್ಧಿಪಡಿಸುವ ಗುರಿಯನ್ನು ಹೊಂದಿದೆ. ಭಾರತೀಯ ಕಂಪನಿಗಳನ್ನು ಜಾಗತಿಕ ಮೌಲ್ಯ ಸರಪಳಿಗಳೊಂದಿಗೆ ಸಂಯೋಜಿಸುವ ಮೂಲಕ ದೇಶೀಯ ಮೌಲ್ಯ ವರ್ಧನೆಯನ್ನು ಹೆಚ್ಚಿಸುತ್ತಿದೆ ಎಂದು ತಿಳಿಸಿದರು. ಇದು ೫೯ ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚು ಹೂಡಿಕೆಯನ್ನು ಆಕರ್ಷಿಸುವ ಮತ್ತು ೯೧ ಸಾವಿರಕ್ಕೂ ಹೆಚ್ಚು ಜನರಿಗೆ ನೇರ ಉದ್ಯೋಗವನ್ನು ಸೃಷ್ಟಿಸುವ ಗುರಿಯನ್ನು ಹೊಂದಿದೆ. ಈ ಯೋಜನೆಯಡಿಯಲ್ಲಿ ಸೃಷ್ಟಿಯಾದ ನೇರ ಉದ್ಯೋಗಗಳ ಸಂಖ್ಯೆ, ಕಂಪನಿಗಳು ಮಾಡಿದ ಬಂಡವಾಳ ವೆಚ್ಚ ಮತ್ತು ಕಂಪನಿಗಳ ವಹಿವಾಟಿನ ಆಧಾರದ ಮೇಲೆ ಅರ್ಜಿದಾರರಿಗೆ ಪ್ರೋತ್ಸಾಹ ಧನ ನೀಡಲಾಗುತ್ತದೆ ಎಂದು ಸಚಿವ ಅಶ್ವಿನಿ ವೈಷ್ಣವ್ ಮಾಹಿತಿ ನೀಡಿದರು.

**ಧ್ವನಿ: ಅಶ್ವಿನಿ ವೈಷ್ಣವ್ ( ೨೨ ಸೆಕೆಂಡ್ಸ್)**

**<><*<><>*><>**

ಇತ್ತೀಚೆಗೆ ನಿಧನರಾದ ಪೋಪ್ ಫ್ರಾನ್ಸಿಸ್ ಅವರ ಅಂತ್ಯಕ್ರಿಯೆ ಧಾರ್ಮಿಕ ವಿಧಿ-ವಿಧಾನಗಳೊಂದಿಗೆ ರೋಮ್‌ನಲ್ಲಿಂದು ಜರುಗಿತು. ರೋಮ್‌ನ ಸೇಂಟ್ ಮೇರಿ ಮೇಜರ್ ಬೆಸಿಲಿಕಾದಲ್ಲಿ ನಡೆದ ಅಂತ್ಯಕ್ರಿಯೆಯಲ್ಲಿ ಭಾರತದ ರಾಷ್ಟ್ರಪತಿ ದ್ರೌಪದಿ ಮುರ್ಮು, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸೇರಿದಂತೆ ವಿಶ್ವದ ಅನೇಕ ಗಣ್ಯರು ಪಾಲ್ಗೊಂಡಿದ್ದರು. ಇದಕ್ಕೂ ಮುನ್ನ ಇಂದು ಬೆಳಗ್ಗೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಪೋಪ್ ಫ್ರಾನ್ಸಿಸ್ ಅವರ ಪಾರ್ಥಿವ ಶರೀರಕ್ಕೆ ಪುಷ್ಪ ನಮನ ಸಲ್ಲಿಸಿದರು. ವ್ಯಾಟಿಕನ್ ನಗರದ ಸೇಂಟ್ ಪೀಟರ್ಸ್ ಸ್ಕ್ವೇರ್‌ನಲ್ಲಿ ಅಂತಿಮ ಸಂಸ್ಕಾರದ ಪ್ರಾರ್ಥನಾ ವಿಧಿಗಳು ಜರುಗಿದವು. ಭಾರತದಿಂದ ರಾಷ್ಟ್ರಪತಿ ಅವರೊಂದಿಗೆ ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ಕೇಂದ್ರ ಅಲ್ಪಸಂಖ್ಯಾತ ವ್ಯವಹಾರಗಳ ರಾಜ್ಯ ಸಚಿವ ಜಾರ್ಜ್ ಕುರಿಯನ್ ಮತ್ತು ಗೋವಾ ವಿಧಾನಸಭೆಯ ಉಪ ಸಭಾಪತಿ ಜೋಶುವಾ ಡಿಸೋಜಾ ಭಾಗವಹಿಸಿದ್ದರು.

**<><*<><>*><>**

ಮುಂಬೈನಲ್ಲಿ ಮೇ ೧ ರಿಂದ ೪ ರವರೆಗೆ ನಡೆಯಲಿರುವ ವಿಶ್ವ, ಶ್ರವಣ, ದೃಶ್ಯ ಮತ್ತು ಮನರಂಜನಾ ಶೃಂಗಸಭೆ- ವೇವ್ಸ್ ೨೦೨೫ ರಲ್ಲಿ ಭಾರತ್ ಮಳಿಗೆ ಅನಾವರಣಗೊಳ್ಳಲಿದೆ. ಭಾರತದ ಕಥೆ ಹೇಳುವ ಪರಂಪರೆ ಹಾಗೂ ಜಾಗತಿಕ ಮಾಧ್ಯಮ ಮತ್ತು ಮನರಂಜನಾ ಕ್ಷೇತ್ರದಲ್ಲಿ ದೇಶದ ಬೆಳೆಯುತ್ತಿರುವ ಪ್ರಭಾವಕ್ಕೆ ಗೌರವಾರ್ಥವಾಗಿ ಭಾರತ ಮಳಿಗೆ ಅನಾವರಣಗೊಳ್ಳಲಿದೆ. 'ಕಲೆಯಿಂದ ಕೋಡ್‌ವರೆಗೆ' ಎಂಬ ಧ್ಯೇಯವಾಕ್ಯದಡಿ ಈ ಮಳಿಗೆಯು ಭಾರತದ ವಸುಧೈವ ಕುಟುಂಬಕಂ ಎಂಬ ಮನೋಭಾವವನ್ನು ಹಾಗೂ ದೇಶದ ಕಲಾತ್ಮಕ ಸಂಪ್ರದಾಯಗಳು ದೀರ್ಘಕಾಲದವರೆಗೆ ಸೃಜನಶೀಲತೆ, ಸಾಮರಸ್ಯ ಮತ್ತು ಸಾಂಸ್ಕೃತಿಕ ರಾಜತಾಂತ್ರಿಕತೆಯ ದಾರಿದೀಪವಾಗಿದೆ ಎಂಬುದನ್ನು ಪ್ರದರ್ಶಿಸುತ್ತದೆ.

**<><*<><>*><>**

ಆಕಾಶವಾಣಿಯ ಜನಪ್ರಿಯ ಮಾಸಿಕ ಮನ್ ಕಿ ಬಾತ್ ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ, ನಾಳೆ ಬೆಳಗ್ಗೆ ೧೧ ಗಂಟೆಗೆ ದೇಶ-ವಿದೇಶಗಳಲ್ಲಿರುವ ಭಾರತೀಯರೊಂದಿಗೆ ತಮ್ಮ ಮನದಾಳದ ಮಾತುಗಳನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್ ಕಾರ್ಯಕ್ರಮದ ೧೨೧ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಮೂಡಿಬರಲಿದೆ.

<><*<><>*><>

ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ -ಡಿಆರ್‌ಡಿಒ ಒಂದು ಸಾವಿರ ಸೆಕೆಂಡ್‌ಗಳಿಗೂ ಹೆಚ್ಚು ಕಾಲ ಸಕ್ರಿಯವಾಗಿ ತಂಪಾಗುವ ಸ್ಕ್ರ್ಯಾಮ್ ಜೆಟ್ ಸಬ್‌ಸ್ಕೇಲ್ ಕಂಬಸ್ಟರ್‌ನ ಯಶಸ್ವಿ ಪರೀಕ್ಷೆಯನ್ನು ನಡೆಸುವ ಮೂಲಕ ಸ್ಕ್ರ್ಯಾಮ್ ಜೆಟ್ ಅಭಿವೃದ್ಧಿಯಲ್ಲಿ ಮಹತ್ವದ ಮೈಲಿಗಲ್ಲು ಸಾಧಿಸಿದೆ. ಹೈದರಾಬಾದ್‌ನ ಡಿಆರ್‌ಡಿಒ ಪ್ರಯೋಗಾಲಯದಲ್ಲಿ ಹೊಸದಾಗಿ ನಿರ್ಮಿಸಲಾದ ಅತ್ಯಾಧುನಿಕ ಸ್ಕ್ರ್ಯಾಮ್ ಜೆಟ್ ಕನೆಕ್ಟ್ ಪರೀಕ್ಷಾ ಸೌಲಭ್ಯದಲ್ಲಿ ಈ ಪರೀಕ್ಷೆ ನಡೆಸಲಾಗಿದೆ. ಇದೇ ಜನವರಿಯಲ್ಲಿ ನಡೆಸಲಾದ ಪರೀಕ್ಷೆಯಲ್ಲಿ ೧೨೦ ಸೆಕೆಂಡ್‌ಗಳು ದಾಖಲಾಗಿತ್ತು. ಈ ಯಶಸ್ವಿ ಪರೀಕ್ಷೆಯ ಬೆನ್ನಲ್ಲೇ ಈ ವ್ಯವಸ್ಥೆ ಶೀಘ್ರದಲ್ಲೇ ಪೂರ್ಣ ಪ್ರಮಾಣದ ಹಾರಾಟಕ್ಕೆ ಯೋಗ್ಯವಾದ ಕಂಬಸ್ಟರ್ ಪರೀಕ್ಷೆಗೆ ಸಿದ್ಧವಾಗಲಿದೆ. ಡಿಆರ್‌ಡಿಒದ ಈ ಸಾಧನೆಯನ್ನು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಶ್ಲಾಘಿಸಿದ್ದು, ಈ ಸಾಧನೆ ರಾಷ್ಟ್ರಕ್ಕಾಗಿ ನಿರ್ಣಾಯಕ ರಕ್ಷಣಾ ತಂತ್ರಜ್ಞಾನಗಳನ್ನು ಅಭಿವೃದ್ಧಿಪಡಿಸುವಲ್ಲಿ ಸರ್ಕಾರದ ಬದ್ಧತೆಯ ಪ್ರತಿಬಿಂಬವಾಗಿದೆ ಎಂದು ಹೇಳಿದ್ದಾರೆ.

<><*<><>*><>

ಈ ಬಾರಿಯ ಕೈಲಾಸ ಮಾನಸ ಸರೋವರ ಯಾತ್ರೆ ಜೂನ್‌ನಿಂದ ಆಗಸ್ಟ್‌ವರೆಗೆ ನಡೆಯಲಿದೆ. ವಿದೇಶಾಂಗ ವ್ಯವಹಾರಗಳ ಸಚಿವಾಲಯ ಯಾತ್ರೆ ಆಯೋಜಿಸಿದ್ದು, ಉತ್ತರಾಖಂಡ್ ರಾಜ್ಯದ ಲಿಪುಲೇಕ್ ಪಾಸ್ ಹಾಗೂ ಸಿಕ್ಕಿಂರಾಜ್ಯದ ನಾಥುಲಾ ಪಾಸ್ ಮೂಲಕ ನಡೆಯಲಿದೆ. ಅರ್ಜಿಗಳನ್ನು ಸ್ವೀಕರಿಸಲು kmy.gov.in ವೆಬ್‌ಸೈಟ್ ತೆರೆಯಲಾಗಿದ್ದು, ನ್ಯಾಯಯುತ ಮಾದರಿಯಲ್ಲಿ ಆಯ್ಕೆ ಪ್ರಕ್ರಿಯೆ ನಡೆಯಲಿದೆ ಎಂದು ಸಚಿವಾಲಯ ತಿಳಿಸಿದೆ. ವೆಬ್‌ಸೈಟ್ ಮೂಲಕ ನೋಂದಣಿ ಮಾಡಿಕೊಳ್ಳುವ ಜತೆಗೆ ಸಲಹೆಗಳನ್ನು ಸಹ ನೀಡಬಹುದಾಗಿದೆ.

<><*<><>*><>

ದೇಶದಲ್ಲಿ ಮತ್ತು ಪ್ರಪಂಚದ ಇತರೆ ಭಾಗಗಳಲ್ಲಿ ಜನರ ಸಮಸ್ಯೆಗಳನ್ನು ಅರ್ಥ ಮಾಡಿಕೊಳ್ಳುವುದರ ಮೂಲಕ ಕೋಪ, ಭಯ ಮತ್ತು ದ್ವೇಷವನ್ನು, ಪ್ರೀತಿ ಮತ್ತು ವಾತ್ಸಲ್ಯದಿಂದ ಎದುರಿಸಬಹುದಾದ ಹೊಸ ರಾಜಕೀಯ ಕ್ರಮಕ್ಕೆ ಲೋಕಸಭೆ ವಿರೋಧ ಪಕ್ಷ ನಾಯಕ ರಾಹುಲ್ ಗಾಂಧಿ ಕರೆ ನೀಡಿದ್ದಾರೆ. ಹೈದರಾಬಾದ್‌ನಲ್ಲಿಂದು ನಡೆದ ಭಾರತ್ ಶೃಂಗಸಭೆ ಉದ್ದೇಶಿಸಿ ಮಾತನಾಡಿದ ಅವರು, ಕಳೆದ ಕೆಲವು ದಶಕಗಳಲ್ಲಿ ಪ್ರಜಾಪ್ರಭುತ್ವ ರಾಜಕೀಯವು ಮೂಲಭೂತವಾಗಿ ಬದಲಾಗಿದೆ. ಹೊಸ ರೀತಿಯ ರಾಜಕೀಯ ಕ್ರಮವನ್ನು ಸ್ಥಾಪಿಸಬೇಕಿದೆ ಎಂದು ಹೇಳಿದರು.

<><*<><>*><>

ಖ್ಯಾತ ಇತಿಹಾಸಕಾರ ಮತ್ತು ಭಾರತೀಯ ಐತಿಹಾಸಿಕ ಸಂಶೋಧನಾ ಮಂಡಳಿಯ ಮಾಜಿ ಅಧ್ಯಕ್ಷ ಡಾ.ಎಂ.ಜಿ.ಎಸ್.ನಾರಾಯಣನ್ ಇಂದು ಬೆಳಗ್ಗೆ ಕೇರಳದ ಕಲ್ಲಿಕೋಟೆಯಲ್ಲಿ ನಿಧನರಾದರು. ಅವರಿಗೆ ೯೨ ವರ್ಷ ವಯಸ್ಸಾಗಿತ್ತು. ಪ್ರಸಿದ್ಧ ಶೈಕ್ಷಣಿಕ ಮತ್ತು ರಾಜಕೀಯ ವಿಮರ್ಶಕರಾದ ಡಾ.ನಾರಾಯಣನ್, ಕ್ಯಾಲಿಕಟ್ ವಿಶ್ವವಿದ್ಯಾಲಯದಲ್ಲಿ ಸುಮಾರು ೧೪ ವರ್ಷಗಳ ಕಾಲ ಇತಿಹಾಸ ವಿಭಾಗದ ಮುಖ್ಯಸ್ಥರಾಗಿದ್ದರು. ಅವರು, ಭಾರತೀಯ ಇತಿಹಾಸ ಒಕ್ಕೂಟದ ಪ್ರಧಾನ ಕಾರ್ಯದರ್ಶಿಯಾಗಿ ಆಯ್ಕೆಯಾಗಿದ್ದರು ಮತ್ತು ನಂತರ ಅದರ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದರು. ಅಲ್ಲದೆ ಅವರು, ಲಂಡನ್‌ನ ಸ್ಕೂಲ್ ಆಫ್ ಓರಿಯಂಟಲ್ ಮತ್ತು ಆಫ್ರಿಕನ್ ಸ್ಟಡೀಸ್‌ನಲ್ಲಿ ಕಾಮನ್‌ವೆಲ್ತ್ ಅಕಾಡೆಮಿಕ್ ಸ್ಟಾಫ್ ಫೆಲೋ ಆಗಿದ್ದರು. ಟೋಕಿಯೊ, ಮೆಕ್ಸಿಕೊ, ಲೆನಿನ್‌ಗ್ರಾಡ್ ಮತ್ತು ಮಾಸ್ಕೋ ವಿಶ್ವವಿದ್ಯಾಲಯಗಳಲ್ಲಿ ಸಂದರ್ಶಕ ಪ್ರಾಧ್ಯಾಪಕರಾಗಿದ್ದರು. ಅವರ ನಿಧನಕ್ಕೆ ಅನೇಕ ಗಣ್ಯರು ಸಂತಾಪ ಸೂಚಿಸಿದ್ದಾರೆ.

**<><*<><>*><>**

ಕೋಲ್ಕತ್ತಾದ ಈಡನ್ ಗಾರ್ಡನ್ಸ್ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ ಇಂಡಿಯನ್ ಪ್ರೀಮಿಯರ್ ಲೀಗ್ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಕೋಲ್ಕತ್ತಾ ನೈಟ್ ರೈಡರ್ಸ್ ಹಾಗೂ ಪಂಜಾಬ್ ಕಿಂಗ್ಸ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಪಂಜಾಬ್ ಕಿಂಗ್ಸ್ ತಂಡ ಬ್ಯಾಟಿಂಗ್ ಆಯ್ಕೆ ಮಾಡಿಕೊಂಡಿದೆ.

**<><*<><>*><>**

ದಕ್ಷಿಣ ಇರಾನಿನ ಬಂದರ್ ಅಬ್ಬಾಸ್‌ನಲ್ಲಿರುವ ಶಾಹಿದ್ ರಾಜೀ ಬಂದರಿನಲ್ಲಿ ಇಂದು ಸಂಭವಿಸಿದ ದೊಡ್ಡ ಸ್ಫೋಟದಲ್ಲಿ ೪೦೦ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ. ಶಾಹಿದ್ ರಾಜೀ ಬಂದರಿನ ವಾರ್ಫ್ ಪ್ರದೇಶದಲ್ಲಿ ಸಂಗ್ರಹಿಸಲಾಗಿದ್ದ ಹಲವಾರು ಕಂಟೇನರ್‌ಗಳ ಸ್ಫೋಟವೇ ಘಟನೆಯ ಮೂಲ ಎಂದು ಸ್ಥಳೀಯ ಮಾಧ್ಯಮಗಳು ವರದಿ ಮಾಡಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**